**All India Radio: Bangalore**
**Regional Bulletin In Kannada**
**11.11.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.11.2025 / 2.30 p.m.**
**<><><><>**

ಮುಖ್ಯಾಂಶಗಳು

1. ದೆಹಲಿ ಬಾಂಬ್ ಸ್ಫೋಟ ಪ್ರಕರಣ ; ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಬಿಗಿ ಭದ್ರತೆ
2. ಮೈಸೂರನ್ನು ಮಾದಕ ವ್ಯಸನ ಮುಕ್ತ ಜಿಲ್ಲೆಯಾಗಿಸಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
3. ಕೋಲಾರದ ಮಾಲೂರು ಕ್ಷೇತ್ರದ ಮತ ಎಣಿಕೆ ಪ್ರಕ್ರಿಯೆ ಪ್ರಗತಿಯಲ್ಲಿ
4. ರಾಜ್ಯದೆಲ್ಲೆಡೆ ಇಂದು ವೀರವನಿತೆ ಒನಕೆ ಓಬವ್ವ ಜಯಂತಿ

<><><><>

ದೆಹಲಿಯ ಕೆಂಪುಕೋಟೆ ಬಳಿ ನಡೆದ ಕಾರ್ ಸ್ಫೋಟದ ಬಳಿಕ ಬೆಂಗಳೂರಿನಲ್ಲಿ ಬಿಗಿಭದ್ರತೆ ಕೈಗೊಳ್ಳಲಾಗಿದೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಟ್ಟೆಚ್ಚರ ಘೋಷಿಸಲಾಗಿದೆ. ಪ್ರಯಾಣಿಕರು ಭದ್ರತಾ ತಪಾಸಣೆಗೆ ಸಾಕಷ್ಟು ಸಮಯಾವಕಾಶವನ್ನು ಮೀಸಲಿಟ್ಟು, ಪ್ರಯಾಣವನ್ನು ನಿಯೋಜಿಸಿ ವಿಮಾನಯಾನ ಸಂಸ್ಥೆಯನ್ನು ಸಂಪರ್ಕಿಸುವಂತೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ. ಮೆಜೆಸ್ಟಿಕ್ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ. ಪೊಲೀಸರಿಗೆ ಜನರು ಸಹಕಾರ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ. ಭಾರತೀಯ ವಿಜ್ಞಾನ ಸಂಸ್ಥೆ, ಇಸ್ರೋ, ವಿಧಾನಸೌದ, ರಾಜಭವನದಲ್ಲಿ ಬಿಗಿ ಭದ್ರತೆ ಒದಗಿಸಲಾಗಿದೆ. ಮೈಸೂರು, ಬೆಳಗಾವಿ, ಕಾರವಾರ, ಹುಬ್ಬಳ್ಳಿ-ಧಾರವಾಡ, ಮಂಗಳೂರಿನಲ್ಲಿ ಕಟ್ಟೆಚ್ಚರ ವಹಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಗೃಹ ಇಲಾಖೆ ಸೂಚಿಸಿದೆ.

<><><><>

ಮೈಸೂರನ್ನು ಮಾದಕ ವ್ಯಸನಮುಕ್ತ ಜಿಲ್ಲೆಯನ್ನಾಗಿ ಮಾಡಲು ಕೆಡಿಪಿ ಸಭೆಯಲ್ಲಿ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಅಪರಾಧ ಪ್ರಮಾಣಗಳು ಹೆಚ್ಚಾದರೆ ಪೊಲೀಸ್ ಅಧಿಕಾರಿಗಳೇ ಹೊಣೆ ಎಂದು ಎಚ್ಚರಿಕೆ ನೀಡಿದ್ದಾರೆ. ಪೊಲೀಸರು ಸಾರ್ವಜನಿಕರ ಜೊತೆ ಉತ್ತಮವಾಗಿ ವರ್ತಿಸಬೇಕು ಎಂದು ತಿಳಿಸಿದ್ದಾರೆ. ಮೈಸೂರು ಜಿಲ್ಲೆ ಶಿಕ್ಷಣ ಸೂಚ್ಯಂಕದಲ್ಲಿ ಕುಸಿದಿದ್ದು, ಮುಂದಿನ ಬಾರಿ ಫಲಿತಾಂಶ ಸುಧಾರಿಸಬೇಕು ಎಂದು ಹೇಳಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ**

ಇದೇ ವೇಳೆ ದೆಹಲಿ ಬಾಂಬ್ ಸ್ಫೋಟ ಪ್ರಕರಣದ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಅಮಾಯಕರ ಜೀವಹಾನಿ ಬೇಸರದ ಸಂಗತಿ ಎಂದು ತಿಳಿಸಿದ್ದಾರೆ. ಸ್ಫೋಟದ ಕುರಿತಂತೆ ಕೇಂದ್ರ ಸರ್ಕಾರ ಸಮಗ್ರ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

<><><><>

ಸುಪ್ರೀಂಕೋರ್ಟ್ ಆದೇಶದಂತೆ ಕೋಲಾರ ಜಿಲ್ಲೆಯ  ಮಾಲೂರು ವಿಧಾನಸಭಾ ಕ್ಷೇತ್ರದ ಮರು ಮತ ಎಣಿಕೆ ಪ್ರಕ್ರಿಯೆ ತೋಟಗಾರಿಕಾ ವಿಶ್ವವಿದ್ಯಾಲಯದಲ್ಲಿ ನಡೆಯುತ್ತಿದೆ. ಶಾಸಕ ಕೆ.ವೈ.ನಂಜೇಗೌಡ ಮತ್ತು ಬಿಜೆಪಿ ಪರಾಜಿತ ಅಭ್ಯರ್ಥಿ ಮಂಜುನಾಥ ಗೌಡ ಇಬ್ಬರಲ್ಲೂ ಮರು ಮತ ಎಣಿಕೆ ಕುತೂಹಲ ಮೂಡಿಸಿದೆ.  ಮರು ಮತ ಎಣಿಕೆ ಪೂರ್ಣಗೊಂಡ ನಂತರ ಚುನಾವಣಾಧಿಕಾರಿಗಳು ಯಾವುದೇ ಫಲಿತಾಂಶವನ್ನು ಘೋಷಿಸದೇ  ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಲಿದ್ದಾರೆ. ಮರು ಮತ ಎಣಿಕೆ ಹಿನ್ನೆಲೆಯಲ್ಲಿ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

<><><>

ಇಂದು ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಆಚರಿಸಲಾಗುತ್ತಿದೆ. ಶತ್ರು ಸೈನ್ಯವನ್ನು ಏಕಾಂಗಿಯಾಗಿ ಎದುರಿಸಿದ ವೀರವನಿತೆ ಓಬವ್ವ ಕನ್ನಡ ನೆಲದ ಶೌರ್ಯ, ಸಾಹಸದ ಪ್ರತೀಕ. ಒನಕೆ ಹಿಡಿದು ವೀರಾವೇಷದಿಂದ ಹೋರಾಡಿದ ಓಬವ್ವ ಜಯಂತಿಯ ಶುಭಾಶಯಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿ ಓಬವ್ವನ ಧೈರ್ಯ, ಸಾಹಸ, ಸಮಯ ಪ್ರಜ್ಞೆ ನಮ್ಮೆಲ್ಲರಿಗೆ ದಾರಿದೀಪ ಎಂದು ತಿಳಿಸಿದ್ದಾರೆ. ಓಬವ್ವ ಜಯಂತಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್ ಮಾತನಾಡಿ, ಚಿತ್ರದುರ್ಗದ ಕೋಟೆಯಲ್ಲಿ  ಸಾಮಾನ್ಯ ಮಹಿಳೆಯಾಗಿದ್ದ ಓಬವ್ವ ತನ್ನ ನಾಡಿನ ರಕ್ಷಣೆಗೆ ಏಕಾಂಗಿಯಾಗಿ ಹೋರಾಡಿ ಮಡಿದ ಇತಿಹಾಸ ಸ್ಮರಣೀಯ ಎಂದು ಸ್ಮರಿಸಿದರು. ಒನಕೆ ಓಬವ್ವ ಸ್ತ್ರೀ ಕುಲದ ಸ್ವಾಭಿಮಾನ ಹಾಗೂ ಆತ್ಮಸ್ಥೈರ್ಯದ ಪ್ರತೀಕವಾಗಿದ್ದಾರೆ ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿಂದು ಹಮ್ಮಿಕೊಂಡಿದ್ದ ಒನಕೆ ಓಬವ್ವ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಓಬವ್ವ ಅವರ ಸಮಯಪ್ರಜ್ಞೆ, ಧೈರ್ಯದ ಮನೋಭಾವ ಮತ್ತು ಆದರ್ಶಗಳನ್ನು ಪ್ರತಿಯೊಬ್ಬರು ರೂಢಿಸಿಕೊಳ್ಳಬೇಕು’ ಎಂದು ಸಲಹೆ ನೀಡಿದ್ದಾರೆ.

<><><>

ಸರ್ಕಾರಿ ಇಲಾಖೆಗಳೊಂದಿಗೆ ಬ್ಯಾಂಕ್‌ಗಳು ಸಮನ್ವಯ, ಸಹಕಾರ ನೀಡಿದಾಗ ಮಾತ್ರ ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸಲು ಸಾಧ್ಯ ಎಂದು ಸಂಸದ ಪಿ.ಸಿ.ಗದ್ದಿಗೌಡರ ತಿಳಿಸಿದ್ದಾರೆ. ಬಾಗಲಕೋಟೆಯಲ್ಲಿ ಇಂದು ನಡೆದ ಲೀಡ್ ಬ್ಯಾಂಕ್ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸರಕಾರದ ಯೋಜನೆಗಳನ್ನು ಘೋಷಿಸುವದಷ್ಟೇ ಅಲ್ಲ ಅವುಗಳನ್ನು ಅನುಷ್ಠಾನಗೊಳಿಸುವುದು ಕೂಡ ಮುಖ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಸರಕಾರದ ವಿವಿಧ ಯೋಜನೆಯಡಿ ನೀಡಲಾಗುವ ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳಿಗೆ ಇಲಾಖೆಯ ಅಧಿಕಾರಿಗಳು ಮತ್ತು ಬ್ಯಾಂಕ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ತಿಳಿಸಿದ್ದಾರೆ.

<><><>

ಭಾರತೀಯ ಹತ್ತಿ ನಿಗಮ ನಿಯಮಿತ ಹುಬ್ಬಳ್ಳಿ ಶಾಖೆ ವತಿಯಿಂದ ಗದಗದಲ್ಲಿ ಬೆಂಬಲ ಬೆಲೆಯಲ್ಲಿ ಹತ್ತಿ  ಖರೀದಿ ಕೇಂದ್ರ ಉದ್ಘಾಟನೆಯಾಗಿದೆ. ಸಂಘದ ಅಧ್ಯಕ್ಷ ರವೀಂದ್ರ ಮೂಲಿಮನಿ ಖರೀದಿ ಕೇಂದ್ರ ಉದ್ಘಾಟಿಸಿದರು. ಹತ್ತಿ

ಮಾರಾಟ ಸಹಕಾರ ಸಂಘದ ನಿರ್ದೇಶಕ ಎಂ.ಆರ್. ಪಾಟೀಲ್, ಕೆ.ಎಚ್. ಪಾಟೀಲ್ ಮತ್ತು ಸದಸ್ಯರು, ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಯಾಳಗಿಶೆಟ್ಟರ ಹಾಗೂ ಭಾರತೀಯ ಹತ್ತಿ ನಿಗಮ ನಿಯಮಿತ ಅಧಿಕಾರಿ ಜಿ. ರಮೇಶ ಸೇರಿ ಹಲವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><>

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆ ಅಂಗವಾಗಿ ಯುವ ಜನರಲ್ಲಿ ಏಕತೆ, ದೇಶಭಕ್ತಿ ಹಾಗೂ ನಾಗರೀಕ ಜವಾಬ್ದಾರಿ ಮನೋಭಾವವನ್ನು ಜಾಗೃತಗೊಳಿಸುವ ರಾಷ್ಟ್ರೀಯ ಏಕತಾ ದಿನ-ಸರ್ದಾರ್ @ ೧೫೦ ಏಕತಾ ಪಾದಯಾತ್ರೆಯನ್ನು ರಾಮನಗರದಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಈ ಏಕತಾ ಪಾದಯಾತ್ರೆ ಯಶಸ್ವಿಗೆ ಸಂಬಂಧಿಸಿದ ಇಲಾಖೆಗಳ ಮುಖ್ಯಸ್ಥರು ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ನಿರ್ದೇಶನ ನೀಡಿದ್ದಾರೆ. ಅಕ್ಟೋಬರ್ ೩೧ರಿಂದ ನವೆಂಬರ್ ೨೫ರೊಳಗೆ ಈ ಕಾರ್ಯಕ್ರಮ ದೇಶದ ಪ್ರತಿಯೊಂದು ಜಿಲ್ಲೆಯಲ್ಲಿಯೂ ನಡೆಯುತ್ತಿದ್ದು, ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ನಡೆಯುವ ಪಾದಯಾತ್ರೆಯಲ್ಲಿ ಜಿಲ್ಲೆಯ ಶಾಲಾ ಕಾಲೇಜು ವಿದ್ಯಾರ್ಥಿಗಳು, ಜನಪ್ರತಿನಿಧಿಗಳು, ಸರ್ಕಾರಿ ನೌಕರರು, ಸಿಬ್ಬಂದಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದ್ದಾರೆ. ಏಕತಾ ಪಾದಯಾತ್ರೆ ನಡೆಯುವ ರಸ್ತೆಯ ಇಕ್ಕೆಲಗಳಲ್ಲಿ ಕಸ ಹಾಗೂ ತ್ಯಾಜ್ಯಗಳಿಲ್ಲದಂತೆ ಸ್ವಚ್ಛಗೊಳಿಸಬೇಕು ಎಂದು ಸೂಚಿಸಿದ್ದಾರೆ.

<><><>

ವಿಜಯಪುರ ನಗರದ ವಿವಿಧ ಕಚೇರಿಗಳಿಗೆ ಜಿಲ್ಲಾಧಿಕಾರಿ ಡಾ. ಕೆ. ಆನಂದ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಉಪ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇರಿಗೆ ಭೇಟಿ ನೀಡಿ, ಕಚೇರಿ ಕಾರ್ಯ ವೈಖರಿ ಕುರಿತು ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದು ಕಚೇರಿ ಕಾರ್ಯನಿರ್ವಹಣೆ ಕುರಿತು ಮಾಹಿತಿ ನೀಡಿದರು.

<><><>

ಬುಡಕಟ್ಟು ಸಮುದಾಯ ತಮ್ಮ ಕಲೆಯನ್ನು ಉಳಿಸಿಕೊಂಡು, ನಾಡಿನ ಪರಂಪರೆ ಮತ್ತು ಪ್ರಾಚೀನತೆಯನ್ನು ಸಂರಕ್ಷಿಸಿಕೊಂಡು ಬರುತ್ತಿದ್ದಾರೆ. ಕುರ್ತಿಕಾಡು ಕಾಫಿ ತೋಟದ ವಿಸ್ತರಣೆಯಿಂದ ಈ ಸಮುದಾಯ ವಿನಾಶದ ಅಂಚಿನಲ್ಲಿದೆ ಎಂದು ಜಾನಪದ ಪರಿಷತ್ತಿನ ಅಧ್ಯಕ್ಷ ಪ್ರೊ.ಹಿ.ಚಿ.ಬೋರಲಿಂಗಯ್ಯ ತಿಳಿಸಿದ್ದಾರೆ. ರಾಮನಗರ ಜಾನಪದ ಲೋಕದಲ್ಲಿ ಕರ್ನಾಟಕ ಜಾನಪದ ಪರಿಷತ್ತು ಹಾಗೂ ಜಾನಪದ ಲೋಕದ ವತಿಯಿಂದ ನಾಡೋಜ ಎಚ್.ಎಲ್. ನಾಗೇಗೌಡರ ನೆನಪಿನ 'ಲೋಕಸಿರಿ-೧೧೧' ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ ಅವರು ನಲ್ವತ್ತು ವರ್ಷಗಳ ಹಿಂದೆ ಕೊರ್ತಿ ಕಾಡಿಗೆ ಹೋಗಿದ್ದರ ಅನುಭವಗಳನ್ನು ಹಂಚಿಕೊಂಡರು.

<><><>

ಪುಣೆಯಲ್ಲಿ ನಡೆಯುತ್ತಿರುವ ಎಲೈಟ್ ಬಿ ಗುಂಪಿನ ರಣಜಿ ಪಂದ್ಯದಲ್ಲಿ ಮಹಾರಾಷ್ಟ್ರ ವಿರುದ್ಧ ಕರ್ನಾಟಕ ೩೧೮ ರನ್‌ಗಳ ಮುನ್ನಡೆಯಲ್ಲಿದೆ. ೨ನೇ ಇನ್ನಿಂಗ್ಸ್‌ನಲ್ಲಿ ಕರ್ನಾಟಕ ೭ ವಿಕೆಟ್ ನಷ್ಟಕ್ಕೆ ೩೦೫ ರನ್ ಗಳಿಸಿ ಆಡುತ್ತಿದೆ.

ನಾಯಕ ಮಯಾಂಕ್ ಅಗರ್ವಾಲ್ ೧೦೩ ರನ್ ಗಳಿಸಿದ್ದಾರೆ. ಮೊದಲ ಇನ್ನಿಂಗ್ಸ್‌ನಲ್ಲಿ ಕರ್ನಾಟಕ ೩೧೩, ಮಹಾರಾಷ್ಟ್ರ ೩೦೦ ರನ್ ಗಳಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>